# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 811 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | : | 24/02/2023 |
| ಉತ್ತರಿಸಬೇಕಾದವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ವಿಷಯ | ಉತ್ತರ |
|---|---|---|
| ಅ) | ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಿಬ್ಬಂದಿಗಳಿಗೆ ಕೆ.ಜಿ.ಐ.ಡಿ , ಇ.ಜಿ.ಐ.ಎಸ್. ಡಿ.ಸಿ.ಆರ್.ಜಿ ಇತ್ಯಾದಿ ಎಲ್ಲಾ ಸರ್ಕಾರಿ ಸೌಲಭ್ಯಗಳನ್ನು ನೀಡಲಾಗಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ನೀಡದಿರಲು ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | **ಕೆ.ಜಿ.ಐ.ಡಿ.**<br>ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರನ್ನು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.<br>**ಇ.ಜಿ.ಐ.ಎಸ್**<br>ಕೆ.ಜಿ.ಐ.ಡಿ. ಸೌಲಭ್ಯವನ್ನು ಅಳವಡಿಸಿಕೊಂಡಲ್ಲಿ ಮಾತ್ರ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಬಹುದಾಗಿದೆ. ಈ ಹಿನ್ನೆಲೆಯಲ್ಲಿ ಸಂಘದ ಖಾಯಂ ನೌಕರರಿಗೆ ಇ.ಜಿ.ಐ.ಎಸ್ ಸೌಲಭ್ಯವನ್ನು ವಿಸ್ತರಿಸಿರುವುದಿಲ್ಲ.<br>ಆದಾಗ್ಯೂ ಸಹ ಸಂಘದ ಖಾಯಂ ನೌಕರರ ಹಿತ ದೃಷ್ಟಿಯಿಂದ ದಿನಾಂಕ: 01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 23 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.<br>**ಡಿ.ಸಿ.ಆರ್.ಜಿ**<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ |
| ಆ) | ಒಂದೇರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | |

| | | |
|---|---|---|
| | | ದಿನಾಂಕ:01.04.2018 ರಿಂದ (DCRG) ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸಲು ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ ತಿಳಿಸಿರುವುದಿರಿಂದ ಈ ಸೌಲಭ್ಯವು ಸರ್ಕಾರದ ಅಧೀನದಲ್ಲಿ ಬರುವ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ ಆದ್ದರಿಂದ ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ನಿರ್ದೇಶಿಸಿದೆ.<br><br>ಆದಾಗ್ಯೂ ಸಂಘದ ವಸತಿ ಶಾಲೆಯ ಶಿಕ್ಷಕರಿಗೆ ಇತರೆ ಎಲ್ಲಾ ಸರ್ಕಾರಿ ನೌಕರರುಗಳಿಗೆ ಅನ್ವಯವಾಗುವಂತೆ, ದಿನಾಂಕ:01.04.2018 ರಿಂದ DCRG ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಗೆ ಸಹಮತಿ ಕೋರಿ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

ಸಕಇ 34 ಎಂಡಿಎಸ್ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.